# ಕ್ಷೇತ್ರ ಸಂಪನ್ಮೂಲ ಕೇಂದ್ರ, ಭಟ್ಕಳ

## ಗುಡ್ ಪ್ರ್ಯಾಕ್ಟಿಸ್ ಮಾಹಿತಿ ಕುರಿತು ಒಂದು ವರದಿ

## ಭಾಷಾ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗಾಗಿ ಆಯೋಜಿಸಿದ್ದ ವಿಜ್ಞಾನ ಮತ್ತು ತಂತ್ರಜ್ಞಾನ ಮೇಳ 2010–11

ಶಿಕ್ಷಣ ಇಲಾಖೆ ಸಯೋಗದೊಂದಿಗೆ ಭಟ್ಕಳ ತಾಲೂಕಿನಲ್ಲಿರುವ ಉರ್ದು ಮಾಧ್ಯಮದ 15 ಸರಕಾರಿ ಹಿರಿಯ ಪ್ರಾಥಮಿಕ ಶಾಲೆಗಳ ವಿದ್ಯಾರ್ಥಿಗಳಗಾಗಿ ಆಯೋಜಿಸಿದ್ದ ಈ ಕಾರ್ಯಕ್ರಮ ಅತ್ಯಂತ ಯಶಸ್ಸನ್ನು ಕಂಡಿದೆ ಎಂದರೆ ಅತಿಶಯೋಕ್ತಿ ಅಲ್ಲ.

ಕಳೆದ 3 ವರ್ಷಗಳಿಂದ ನಡೆಸಲ್ಪಡುತ್ತಾ ಬಂದಿರುವಂತ ಈ ಕಾರ್ಯಕ್ರಮ ವಿದ್ಯಾರ್ಥಿಗಳಲ್ಲಿ ವೈಜ್ಞಾನಿಕ ಮನೋಭಾವ'ನ್ನು ಬೆಳಸಿ ಅವರ ಕುತೂಹಲಕರ ಪ್ರಶ್ನೆಗಳಿಗೆ ಅವರೇ ಉತ್ತರವನ್ನು ಕಂಡುಕೊಳ್ಳುವ ಸಾಧ್ಯೆಯತ್ತ ಪ್ರಯತ್ನ ಇದಾಗಿದೆ. ಈ ಕಾರ್ಯಗಾರದಲ್ಲಿ ಪ್ರತಿ ಶಾಲೆಯಿಂದ 7 ವಿಜ್ಞಾನಶಾಕ್ತ ವಿದ್ಯಾರ್ಥಿಗಳು ಭೌತಶಾಸ್ತ್ರ, ರಸಾಯನಶಾಸ್ತ್ರ, ಹಾಗೂ ಜೀವಶಾಸ್ತ್ರಗಳಿಗೆ ಸಂಬಂಧಿಸಿದ ಕಾರ್ಯನಿರತ ಮಾದರಿಗಳನ್ನು ಪ್ರದರ್ಶಿಸಿದ್ದು ಎಲ್ಲರ ಗಮನ ಸೆಳೆಯಿತು. ಈ ಮಾದರಿಗಳನ್ನು 3 ಜನ ಸಂಪನ್ಮೂಲ ವ್ಯಕ್ತಿಗಳ ಮಾರ್ಗದರ್ಶನದಲ್ಲಿ ವಿದ್ಯಾರ್ಥಿಗಳು ತಯಾರಿಸಿದ್ದು ಅವುಗಳೆಲ್ಲವು ಕಡಿಮೆ ವೆಚ್ಚದ ವಸ್ತುಗಳಿಂದ ನಿರುಪಯುಕ್ತ ವಸ್ತುಗಳಿಂದ ಮಾಡಲ್ಪಟ್ಟವೆ.

ಈ ಮಾದರಿಗಳ ಬಗ್ಗೆ ಮಾದರಿ ತಯಾರಿಸಿದ ವಿದ್ಯಾರ್ಥಿಗಳು ಅವುಗಳು ಕಾರ್ಯನಿರ್ವಹಿಸುತ್ತಿರುವ ನೀತಿ ಅದಕ್ಕಿರುವ ವೈಜ್ಞಾನಿಕ ಹಿನ್ನೆಲೆಯ ಕುರಿತು ವಿವರಣೆ ಹಾಗೂ ವಿಶ್ಲೇಷಣೆ ಆಗಮಿಸಿದ ಅತಿಥಿ ಅಭ್ಯಾಗತರಿಗೆ ಆಶ್ಚರ್ಯವನ್ನು ಮೂಡಿಸಿತು.

ತೀರಾ ಶೈಕ್ಷಣಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ವಿದ್ಯಾರ್ಥಿಗಳಿಗೆ ಈ ಕಾರ್ಯಕ್ರದಿಂದ ವೈಜ್ಞಾನಿಕ ಮನೋಭಾವನೆಯನ್ನು ಪ್ರೇರೇಪಿಸುವ ವಾತಾವರಣ ನಿರ್ಮಾಣವಾಗಿ ವಿದ್ಯಾರ್ಥಿಗಳು ಹೆಚ್ಚೆಚ್ಚು ಇಂತಹ ಮೇಳಗಳಲ್ಲಿ ಭಾಗವಾಹಿಸುವಂತಾಗುತ್ತದೆ.